ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು 3-4 ವರ್ಷಗಳಿಂದ ಸತತವಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

211(242) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡುಗು ಜಿಲ್ಲೆಯಲ್ಲಿ ಕಳೆದ ಮೂರ್ನಾಲ್ಕು ವರ್ಷಗಳಿಂದ ಸತತವಾಗಿ ಕಾಫಿ ಬೆಳೆ ಹಾಳಾಗಿರುವುದರಿಂದ, ಕಾಫಿ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸೂಕ್ತ ಹಾಗೂ ನ್ಯಾಯಸಮ್ಮತ ಬೆಂಬಲ ಬೆಲೆ ನೀಡಿ ಕಾಫಿಯನ್ನು ಖರೀದಿ ಮಾಡುವ ಮೂಲಕ ಕಾಫಿ ಬೆಳೆಗಾರರ ನೆರವಿಗೆ ಸರ್ಕಾರ ಬಂದಿದೆಯೇ;

(ಇ) ಸತತವಾಗಿ ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರಿಗೆ ಆರ್ಥಿಕವಾಗಿ ಅನುಕೂಲವಾಗುವಂತೆ ಸರ್ಕಾರ ರೂಪಿಸುವ ಶಾಶ್ವತ ಪರಿಹಾರ ಕ್ರಮಗಳೇನು; ಹಾಗೂ ಇದುವರೆಗೆ ಕಲ್ಪಿಸಲಾಗಿರುವ ಸೌಲಭ್ಯಗಳಾವುವು ? (ವಿವರ ನೀಡುವುದು)